ಆ) ಉದ್ಭವಿಸುವುದಿಲ್ಲ.

ವಿಷಯ:- ಕಾರವಾರದ ಬಳಿ ರಸಗೊಬ್ಬರ ಕಾರ್ಖಾನೆ ಸ್ಥಾಪನೆ.

1087 (1818) **ಶ್ರೀ ರಾಮಲಿಂಗಾರೆಡ್ಡಿ (ಜಯನಗರ):-** ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಮತ್ತು ಸಂಪನ್ಮೂಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಾರವಾರದ ಬಳಿ ರಸಗೊಬ್ಬರ ಕಾರ್ಖಾನೆಯನ್ನು ಸ್ಥಾಪಿಸಲು ಸರ್ಕಾರದವರು ಪರವಾನಗಿ ನೀಡಿದ್ದಾರೆಯೇ?

ಆ) ಇದನ್ನು ಖಾಸಗೀ ವಲಯದಲ್ಲಿ ಸ್ಥಾಪಿಸಲಾಗುವುದೇ?

ಇ) ಈ ಉದ್ದೇಶಿತ ಕಾರ್ಖಾನೆಯಿಂದ ಉತ್ಪತ್ತಿಯಾಗಲಿರುವ ರಸಗೊಬ್ಬರದ ಪ್ರಮಾಣವೆಷ್ಟು?

ಈ) ಇದರಿಂದ ಪರಿಸರದ ಮೇಲೆ ಯಾವುದೇ ಪರಿಣಾಮ ಉಂಟಾಗುವುದಿಲ್ಲವೇ?

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಮತ್ತು ಸಂಪನ್ಮೂಲ ಅಭಿವೃದ್ಧಿ ಸಚಿವರು):-

ಅ) ಮೆ: ದಾಲ್ಮಿಯಾ ಬ್ರದರ್ಸ್ ಕಂಪನಿಯವರು ಅಮೋನಿಯಾ, ಯೂರಿಯಾ ರಸಗೊಬ್ಬರ ಕಾರ್ಖಾನೆ ಸ್ಥಾಪಿಸಲು ಮುಂದೆ ಬಂದಿದ್ದು, ಈ ಕಾರ್ಖಾನೆಯ ಸ್ಥಾಪನೆಗಾಗಿ ಉನ್ನತ ಮಟ್ಟದ ಸಮಿತಿಯ ಸಭೆಯಲ್ಲಿ ಅನುಮತಿ ನೀಡಲಾಗಿದೆ.

ಆ) ಹೌದು

ಇ) ಈ ಕಾರ್ಖಾನೆಯ ಉದ್ದೇಶಿತ ಸಾಮರ್ಥ್ಯವು 1 ಮಿಲಿಯನ್ ಟನ್ ಅಮೋನಿಯ, ಯೂರಿಯಾ ಆಗಿರುತ್ತದೆ.

ಈ) ಪರಿಸರದ ಮೇಲೆ ಯಾವುದೇ ಪರಿಣಾಮ ಉಂಟಾಗದಂತೆ ಕಾರ್ಖಾನೆಯನ್ನು ಸ್ಥಾಪಿಸುವ ಮುಂಚೆ ಎಲ್ಲ ಕ್ರಮ ಕೈಗೊಳ್ಳಲು ಘಟಕವು ಬದ್ಧವಾಗಿರುತ್ತದೆ, ಮತ್ತು ಈ ಬಗ್ಗೆ ಘಟಕವು ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಕೇಂದ್ರ ಸರ್ಕಾರದ ಪರಿಸರ ಇಲಾಖೆಯಿಂದ ಪೂರ್ವಾನುಮತಿ ಪಡೆಯಬೇಕಾಗುತ್ತದೆ.

ವಿಷಯ:- ಆರಕಲಗೂಡು ಪಟ್ಟಣದಲ್ಲಿ ಪರಿಶಿಷ್ಟ ಜಾತಿ: ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯ ಕಟ್ಟಡಕ್ಕೆ ಮಂಜೂರಾತಿ.

1088 (2031) **ಶ್ರೀ ಎ.ಟಿ. ರಾಮಸ್ವಾಮಿ (ಆರಕಲಗೂಡು):-** ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಆರಕಲಗೂಡು ಪಟ್ಟಣದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕಾಲೇಜು ವಿದ್ಯಾರ್ಥಿಗಳ ವಿದ್ಯಾರ್ಥಿನಿಲಯಕ್ಕೆ ಮತ್ತು ದೊಡ್ಡ ಬೆಮ್ಮತ್ತಿಯಲ್ಲಿರುವ ಪರಿಶಿಷ್ಟ ಜಾತಿ ಮತ್ತು

ಶಿಷ್ಟ ಪಂಗಡದ ವಿದ್ಯಾರ್ಥಿನಿಲಯಕ್ಕೆ ಕಟ್ಟಡಗಳಿಲ್ಲದೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಕಟ್ಟಡಗಳು ಮಂಜೂರಾತಿಯಾಗದಿದ್ದರೆ, ಇನ್ನೆಷ್ಟು ದಿವಸಗಳಲ್ಲಿ ಮಂಜೂರಾತಿ ಮಾಡಲಾಗುವುದು?

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು):-

ಅ) ಬಂದಿದೆ.

ಆ) ಈ 2 ವಿದ್ಯಾರ್ಥಿನಿಲಯಗಳಿಗೆ ಸಂಬಂಧಿಸಿದಂತೆ ಅಂದಾಜು ಪಟ್ಟಿ ಮತ್ತು ನಕ್ಷೆಯನ್ನು 1991-95 ನೇ ಸಾಲಿನ ದರ ಪಟ್ಟಿಯನ್ವಯ ತಯಾರಿಸಲಾಗಿದ್ದು ಇದನ್ನು 1996-97ನೇ ಸಾಲಿನ ದರ ಪಟ್ಟಿಯನ್ವಯ ಪರಿಶೀಲಿಸಿ ಕ್ರಮವಹಿಸುವಂತೆ ಇಲಾಖೆಗೆ ತಿಳಿಸಲಾಗಿದೆ.

ಪರಿಷ್ಕೃತ ಅಂದಾಜು ಪಟ್ಟಿ ಮತ್ತು ನಕ್ಷೆ ಬಂದ ಕೂಡಲೆ ಈ ವಿದ್ಯಾರ್ಥಿನಿಲಯ ಕಟ್ಟಡಗಳಿಗೆ ಸಂಬಂಧಿಸಿದ ಅಂದಾಜುಪಟ್ಟಿ: ನಕ್ಷೆಗೆ ಆಡಳಿತಾತ್ಮಕ ಮಂಜೂರಾತಿ ನೀಡಿ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಇಂಡಿ ಮತ್ತು ಸಿಂಧಗಿ ತಾಲ್ಲೂಕುಗಳಲ್ಲಿ ರೇಷ್ಮೆ ಹುಳುಗಳಿಗೆ ಖಾಯಿಲೆ.

1089 (1708) **ಶ್ರೀ ರವಿಕಾಂತ್ ಎಸ್.ಪಾಟೀಲ್ (ಇಂಡಿ):-** ಮಾನ್ಯ ರೇಷ್ಮೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಇಂಡಿ ಹಾಗೂ ಸಿಂಧಗಿ ತಾಲ್ಲೂಕುಗಳಲ್ಲಿ ರೇಷ್ಮೆ ಹುಳುಗಳಿಗೆ ಕಾಯಿಲೆ ಬಂದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಸಂಬಂಧಪಟ್ಟ ರೈತರಿಗೆ ಔಷಧಿಗಳನ್ನು ಉಚಿತವಾಗಿ ನೀಡಲಾಗಿದೆಯೆ?

ಇ) ಈ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ. ವರದೇಗೌಡ (ರೇಷ್ಮೆ ರಾಜ್ಯ ಸಚಿವರು):-

ಅ) ಬಂದಿಲ್ಲ.

ಆ) ಆದರೂ ರೇಷ್ಮೆ ಹುಳುಗಳಿಗೆ ಸಾಮಾನ್ಯವಾಗಿ ಬರುವ ರೋಗಗಳನ್ನು ತಡೆಯಲು ಮುಂಜಾಗ್ರತೆ ಕ್ರಮವಾಗಿ ರೋಗ ನಿವಾರಕಗಳನ್ನು ರೇಷ್ಮೆ ಬೆಳೆಗಾರರಿಗೆ ಉಚಿತವಾಗಿ ವಿತರಿಸಲಾಗುತ್ತಿದೆ.

ವಿಷಯ:- ಹಿಂದುಳಿದ ವರ್ಗಗಳ ಹಾಸ್ಟೆಲ್ ಅಭಿವೃದ್ಧಿ ಕುರಿತು.

1092 (2099) **ಶ್ರೀ ಎ. ರಾಮದಾಸ (ಕೃಷ್ಣ ರಾಜ):-** ಮಾನ್ಯ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?